ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಹುಬ್ಬಳ್ಳಿ-ಧಾರವಾಡ ಪಾಲಿಕೆಯ ಮಹಿಳಾ ಹೊರಗುತ್ತಿಗೆ ನೌಕರರ ಮೆಡಿಕಲ್ ಬೋನಸ್ ಮೊತ್ತದ ಯೋಜನೆ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):-

938(1033) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ಮಹಿಳಾ ಪೌರ ಕಾರ್ಮಿಕರಿಗೆ ತಲಾ ರೂ.2,500/-ರಂತೆ ಕಲಂ 08ರ ಪ್ರಕಾರ ಮೆಡಿಕಲ್ ಬೋನಸ್ ಮೊತ್ತವನ್ನು ಪಾವತಿಸುವ ಯೋಜನೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ಮೇಲೆ ಕೆಲಸ ಮಾಡುತ್ತಿರುವ ಎಷ್ಟು ಮಹಿಳಾ ಪೌರ ಕಾರ್ಮಿಕರಿಗೆ ಹೆರಿಗೆ ಸೌಲಭ್ಯಗಳ ಕಾಯ್ದೆ 1961ರ ಅನ್ವಯ ಯಾವ ಯಾವ ಸಾಲಿನಲ್ಲಿ ಎಷ್ಟು ಮೆಡಿಕಲ್ ಬೋನಸ್ ಸಂದಾಯ ಮಾಡಲಾಗಿದೆ;

(ಇ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ಮೇಲೆ ಕೆಲಸ ಮಾಡುತ್ತಿರುವ ಎಷ್ಟು ಹೊರಗುತ್ತಿಗೆ ಮಹಿಳಾ ಪೌರ ಕಾರ್ಮಿಕರಿಗೆ ಹೆರಿಗೆ ಸೌಲಭ್ಯಗಳ ಕಾಯ್ದೆ 1961ರ ಅನ್ವಯ ಭತ್ಯೆ ಸಂದಾಯವಾಗದೆ ಬಾಕಿ ಉಳಿದಿದೆ ; ಬಾಕಿ ಉಳಿಯಲು ಕಾರಣಗಳೇನು; ಉಳಿದಿರುವ ಸೌಲಭ್ಯಗಳನ್ನು ಪೂರೈಸುವುದು ಯಾವಾಗ ?